**National**
**Kannada**
**02.06.2026 19.35 hrs**
**ಆಕಾಶವಾಣಿ, ಬೆಂಗಳೂರು**

# ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಭಾರತ–ನೇಪಾಳ ನಡುವಿನ ದ್ವಿಪಕ್ಷೀಯ ಸಂಬಂಧಗಳಲ್ಲಿ ಯಾವುದೇ ಮೂರನೇ ರಾಷ್ಟ್ರದ ಪಾತ್ರವಿಲ್ಲ – ಕೇಂದ್ರ ಸರ್ಕಾರ
2. ದಕ್ಷಿಣ ಆಫ್ರಿಕಾ ಉಪಾಧ್ಯಕ್ಷರೊಂದಿಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮಾತುಕತೆ
3. ಅಗಸ್ತ್ಯಮಲೈ ಪರಿಸರ ಸೂಕ್ಷ್ಮ ವಲಯದ ಸಂರಕ್ಷಿತ ಪ್ರದೇಶಗಳಲ್ಲಿನ ಒತ್ತುವರಿ ತೆರವುಗೊಳಿಸುವಂತೆ ಸುಪ್ರೀಂಕೋರ್ಟ್ ಆದೇಶ
4. ಮಹಿಳಾ ಟಿ–20 ಕ್ರಿಕೆಟ್; ಸರಣಿಯ ಮೂರನೇ ಪಂದ್ಯದಲ್ಲಿಂದು ಭಾರತ–ಇಂಗ್ಲೆಂಡ್ ಮುಖಾಮುಖಿ

---

ಭಾರತ ಮತ್ತು ನೇಪಾಳ ನಡುವಿನ ದ್ವಿಪಕ್ಷೀಯ ಸಂಬಂಧಗಳಲ್ಲಿ ಯಾವುದೇ ಮೂರನೇ ರಾಷ್ಟ್ರದ ಪಾತ್ರವಿಲ್ಲ ಎಂದು ಭಾರತ ಪ್ರತಿಪಾದಿಸಿದೆ.

ಗಡಿ ವಿಷಯಗಳ ಎಲ್ಲಾ ಅಂಶಗಳನ್ನು ನಿಭಾಯಿಸಲು ಸ್ಥಾಪಿತ ದ್ವಿಪಕ್ಷೀಯ ಕಾರ್ಯವಿಧಾನಗಳಿವೆ. ಭಾರತ–ನೇಪಾಳ ಗಡಿಯ ಸುಮಾರು ಶೇಕಡ 98 ರಷ್ಟು ಭಾಗವನ್ನು ಗುರುತಿಸಲಾಗಿದ್ದರೂ, ಕೆಲವು ಬಗೆಹರಿಯದ ಭಾಗಗಳಿವೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದರು.

ಜಮ್ಮು ಮತ್ತು ಕಾಶ್ಮೀರಕ್ಕೆ ಸಂಬಂಧಿಸಿದಂತೆ ಪಾಕಿಸ್ತಾನ–ಐರೋಪ್ಯ ಒಕ್ಕೂಟದ ಜಂಟಿ ಹೇಳಿಕೆಯಲ್ಲಿ ಮಾಡಲಾದ ಅನಗತ್ಯ ಉಲ್ಲೇಖಗಳನ್ನು ಭಾರತ ತಿರಸ್ಕರಿಸಿದೆ. ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್ ಕೇಂದ್ರಾಡಳಿತ ಪ್ರದೇಶಗಳು ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗಗಳಾಗಿವೆ. ಅಂತಹ ವಿಷಯಗಳಲ್ಲಿ ಯಾವುದೇ ಹಕ್ಕು ಇಲ್ಲದವರು ಯಾವುದೇ ಹೇಳಿಕೆ ನೀಡುವುದನ್ನು ತಡೆಯಬೇಕು ಎಂದು ಅವರು ಪ್ರತಿಪಾದಿಸಿದ್ದಾರೆ.

---

ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿ 2025 ಪ್ರದಾನ ಸಮಾರಂಭ ನಾಳೆ ನವದೆಹಲಿಯಲ್ಲಿ ನಡೆಯಲಿದೆ. ದೇಶಾದ್ಯಂತದ 42 ಅತ್ಯುತ್ತಮ ಪಂಚಾಯತ್‌ಗಳಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು.

ಸಮಾರಂಭದಲ್ಲಿ, ದೀನ್ ದಯಾಳ್ ಉಪಾಧ್ಯಾಯ ಪಂಚಾಯತ್ ಸತತ ವಿಕಾಸ ಪುರಸ್ಕಾರ ವಿಭಾಗದ ಅಡಿಯಲ್ಲಿ 34 ಗ್ರಾಮ ಪಂಚಾಯತ್‌ಗಳಿಗೆ ಮತ್ತು ನಾನಾಜಿ ದೇಶ್‌ಮುಖ್ ಸರ್ವೋತ್ತಮ ಪಂಚಾಯತ್ ಸತತ ವಿಕಾಸ ಪುರಸ್ಕಾರ ವಿಭಾಗದ ಅಡಿಯಲ್ಲಿ ಎಂಟು ಪಂಚಾಯತ್‌ಗಳಿಗೆ ಪ್ರಶಸ್ತಿ ನೀಡಲಾಗುವುದು. ಪ್ರಶಸ್ತಿ ಪಡೆದ ಪಂಚಾಯತ್‌ಗಳ ಮುಖ್ಯಸ್ಥರು ತಮ್ಮ ಅತ್ಯುತ್ತಮ ಅಭ್ಯಾಸಗಳು ಮತ್ತು ಸಾಧನೆಗಳ ಕುರಿತು ಪ್ರಸ್ತುತಿ ಸಹ ನೀಡಲಿದ್ದಾರೆ.

ದೇಶಾದ್ಯಂತದ 42 ಅತ್ಯುತ್ತಮ ಪಂಚಾಯಿತಿಗಳಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುತ್ತಿದೆ. ಕರ್ನಾಟಕ ಆರು ಗ್ರಾಮ ಪಂಚಾಯಿತಿಗಳು ಅಭಿವೃದ್ಧಿ ಪುರಸ್ಕಾರಕ್ಕೆ ಭಾಜನವಾಗಿವೆ.

ಆಯ್ಕೆಯಾದ ಆರು ಗ್ರಾಮ ಪಂಚಾಯಿತಿಗಳಲ್ಲಿ ಐದು ಪಂಚಾಯಿತಿಗಳು ಉಡುಪಿ ಜಿಲ್ಲೆಗೆ ಸೇರಿವೆ. ಹೆಬ್ರಿ ತಾಲೂಕಿನ ಮುದ್ರಾಡಿ ಮತ್ತು ಮಡಾಮಕ್ಕಿ, ಕುಂದಾಪುರ ತಾಲೂಕಿನ ವಂಡ್ಸೆ ಮತ್ತು ಹಕ್ಲಾಡಿ ಹಾಗೂ ಕಾರ್ಕಳ ತಾಲೂಕಿನ ಸಾಣೂರು

ಉಡುಪಿ ಜಿಲ್ಲೆಯಿಂದ ಆಯ್ಕೆಯಾದ ಐದು ಗ್ರಾಮ ಪಂಚಾಯತ್‌ಗಳಾಗಿವೆ. ಬೆಂಗಳೂರು ನಗರ ಜಿಲ್ಲೆಯ ಹಾಲನಾಯಕನಹಳ್ಳಿ ರಾಷ್ಟ್ರೀಯ ಮಟ್ಟದ ಪುರಸ್ಕಾರಕ್ಕೆ ಆಯ್ಕೆಯಾಗಿರುವ ಮತ್ತೊಂದು ಗ್ರಾಮ ಪಂಚಾಯತ್ ಆಗಿದೆ.

ಕೇಂದ್ರ ಸರ್ಕಾರ ಒಟ್ಟು ಆರು ವಿಭಾಗದಲ್ಲಿ ಪ್ರಶಸ್ತಿಯನ್ನು ನೀಡುತ್ತಿದ್ದು, ಇವುಗಳಲ್ಲಿ ಮುದ್ರಾಡಿ ಗ್ರಾಮ ಪಂಚಾಯತ್ ಬಡತನ ಮುಕ್ತ ಹಾಗೂ ಜೀವನೋಪಾಯ ಸಂವರ್ಧನ ವಿಭಾಗದಲ್ಲಿ ಪ್ರಶಸ್ತಿ ಪಡೆದರೆ, ವಂಡ್ಸೆ ಗ್ರಾಮ ಪಂಚಾಯತ್ ಆರೋಗ್ಯಪೂರ್ಣ ಪಂಚಾಯತ್ ವಿಭಾಗದಲ್ಲಿ ಪ್ರಶಸ್ತಿಯನ್ನು ಪಡೆದಿದೆ.

ಹೆಬ್ರಿ ತಾಲೂಕಿನ ಮಡಾಮಕ್ಕಿ ಗ್ರಾಮ ಪಂಚಾಯತ್, ಜಲಸಮೃದ್ಧ ಮೂಲಸೌಕರ್ಯ ಅಭಿವೃದ್ಧಿ ವಿಭಾಗದಲ್ಲಿ ಪ್ರಶಸ್ತಿ ಪಡೆದಿದೆ. ಕಾರ್ಕಳ ತಾಲೂಕಿನ ಸಾಣೂರು ಗ್ರಾಮ ಪಂಚಾಯತ್, ಸ್ವಯಂಸಮೃದ್ಧ ಮೂಲ ಸೌಕರ್ಯ ಅಭಿವೃದ್ಧಿ ವಿಭಾಗದಲ್ಲಿ ಹಾಗೂ ಹಕ್ಲಾಡಿ ಗ್ರಾಮ ಪಂಚಾಯತ್ ಸಾಮಾಜಿಕ ನ್ಯಾಯ ಹಾಗೂ ಸಾಮಾಜಿಕ ಸುರಕ್ಷತಾ ಪಂಚಾಯತ್ ವಿಭಾಗದಲ್ಲಿ ರಾಜ್ಯದ ಅತ್ಯುತ್ತಮ ಪಂಚಾಯತ್ ಆಗಿ ಮಾನ್ಯತೆ ಪಡೆದಿದೆ.

ಬೆಂಗಳೂರಿನ ಹಾಲನಾಯಕನಹಳ್ಳಿ ಪಂಚಾಯತ್ ಮಕ್ಕಳ ಸ್ನೇಹಿ ಪಂಚಾಯತ್ ಆಗಿ ಪುರಸ್ಕಾರಕ್ಕೆ ಆಯ್ಕೆಯಾಗಿದೆ ಎಂದು ಕೇಂದ್ರ ಪಂಚಾಯತ್‌ರಾಜ್ ಸಚಿವಾಲಯ ತಿಳಿಸಿದೆ.

---

ದಕ್ಷಿಣ ಆಫ್ರಿಕಾದ ಉಪಾಧ್ಯಕ್ಷ ಶಿಪೋಕೋಸಾ ಪೌಲಸ್ ಮಾಶಾತಿಲೆ ಅವರು ಇಂದು ನವದೆಹಲಿಯಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಅವರೊಂದಿಗೆ ದಕ್ಷಿಣ ಆಫ್ರಿಕಾ ಸರ್ಕಾರದ ಹಿರಿಯ ಸಚಿವರು ಮತ್ತು ಅಧಿಕಾರಿಗಳನ್ನೊಳಗೊಂಡ ಉನ್ನತ ಮಟ್ಟದ ನಿಯೋಗ ಆಗಮಿಸಿತ್ತು.

ಉಭಯ ನಾಯಕರು ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ದ್ವಿಪಕ್ಷೀಯ ಬಾಂಧವ್ಯವನ್ನು ಬಲಪಡಿಸುವ ಕುರಿತು ಚರ್ಚೆ ನಡೆಸಿದರು.

ವಿಶೇಷವಾಗಿ ವ್ಯಾಪಾರ, ಹೂಡಿಕೆ, ರಕ್ಷಣಾ ಸಹಕಾರ, ಕೌಶಲ್ಯಾಭಿವೃದ್ಧಿ ಮತ್ತು ಉಭಯ ದೇಶಗಳ ಜನರ ನಡುವಿನ ಸಂಬಂಧವನ್ನು ವೃದ್ಧಿಸುವ ಬಗ್ಗೆ ಗಮನಹರಿಸಲಾಯಿತು. ಜಾಗತಿಕ ದಕ್ಷಿಣದ ಆದ್ಯತೆಗಳನ್ನು ಮುನ್ನಡೆಸುವ ಮತ್ತು ಬಹುಪಕ್ಷೀಯ ವೇದಿಕೆಗಳಲ್ಲಿ ಸಹಕಾರವನ್ನು ಹೆಚ್ಚಿಸುವ ಕುರಿತು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

---

ತಮಿಳುನಾಡು ಮತ್ತು ಕೇರಳ ವ್ಯಾಪ್ತಿಯ ಅಗಸ್ತ್ಯಮಲೈ ಪರಿಸರ ಸೂಕ್ಷ್ಮ ವಲಯದ ಸಂರಕ್ಷಿತ ಪ್ರದೇಶಗಳಲ್ಲಿನ ಒತ್ತುವರಿಯನ್ನು ಗಂಭೀರವಾಗಿ ಪರಿಗಣಿಸಿರುವ ಸುಪ್ರೀಂ ಕೋರ್ಟ್, ಕಾಲಮಿತಿಯೊಳಗೆ ತೆರವು ಕಾರ್ಯಾಚರಣೆ ನಡೆಸುವಂತೆ ಆದೇಶಿಸಿದೆ.

ಈ ಕುರಿತು ಆದ್ಯತೆಯ ಮೇರೆಗೆ ಸಮಗ್ರ ಯೋಜನೆಯನ್ನು ಸಿದ್ಧಪಡಿಸಿ ಅನುಷ್ಠಾನಗೊಳಿಸುವಂತೆ ಸರ್ವೋಚ್ಚ ನ್ಯಾಯಾಲಯ ಉಭಯ ರಾಜ್ಯಗಳಿಗೆ ನಿರ್ದೇಶನ ನೀಡಿದೆ. ಅಲ್ಲದೆ, ಒತ್ತುವರಿದಾರರೆಂದು ಗುರುತಿಸಲಾದ 118 ಹಾಲಿ ಮತ್ತು ನಿವೃತ್ತ ಸರ್ಕಾರಿ ನೌಕರರ ವಿರುದ್ಧ ಶಿಸ್ತು ಹಾಗೂ ಕಾನೂನು ಕ್ರಮ ಜರುಗಿಸುವಂತೆ ಸೂಚಿಸಿದೆ.

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರಿದ್ದ ನ್ಯಾಯಪೀಠ, ಈ ಹಿಂದೆ ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್ ನೀಡಿದ ಆದೇಶಗಳ ಹೊರಾಗಿಯೂ ದಶಕಗಳಿಂದ ಒತ್ತುವರಿ ಮುಂದುವರಿದಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ.

ಒತ್ತುವರಿ ತೆರವುಗೊಳಿಸಿದ ಬಳಿಕ ಆ ಪ್ರದೇಶದ ಪರಿಸರ ಮರುಸ್ಥಾಪನೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ನ್ಯಾಯಾಲಯ ಹೇಳಿದೆ.

---

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಹಾಗೂ ಜರ್ಮನಿಯ ತುರಿಂಗಿಯಾ ಪ್ರಾಂತ್ಯದ ಮುಖ್ಯಸ್ಥ ಮಾರಿಯೋ ವಾಯ್ಗ್ಟ್ ಅವರು ನವದೆಹಲಿಯಲ್ಲಿ ಇಂದು ಕ್ವಾಂಟಮ್ ಸಂವಹನ, ಫೋಟೋನಿಕ್ಸ್ ಮತ್ತು ಉದ್ಯಮ ಆಧಾರಿತ ಡೀಪ್–ಟೆಕ್ ಸಹಭಾಗಿತ್ವದ ಕುರಿತು ಮಹತ್ವದ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಜಿತೇಂದ್ರ ಸಿಂಗ್, ಭಾರತ ಇಂದು ವಿಶ್ವದ ಮೂರನೇ ಅತಿ ದೊಡ್ಡ ಸ್ಟಾರ್ಟ್‌ಅಪ್ ಪರಿಸರ ವ್ಯವಸ್ಥೆಯನ್ನು ಹೊಂದಿದ್ದು, ಜೈವಿಕ ತಂತ್ರಜ್ಞಾನ, ಆರೋಗ್ಯ ರಕ್ಷಣೆ, ಜಲ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ಬಾಹ್ಯಾಕಾಶ ತಂತ್ರಜ್ಞಾನಗಳಲ್ಲಿ ಅಂತಾರಾಷ್ಟ್ರೀಯ ಸಹಯೋಗಕ್ಕಾಗಿ ವ್ಯಾಪಕ ಅವಕಾಶಗಳನ್ನು ಒದಗಿಸುತ್ತಿದೆ ಎಂದು ಹೇಳಿದರು.

ಭಾರತ ಮತ್ತು ಜರ್ಮನಿ ದೇಶಗಳು ವಿಜ್ಞಾನ, ತಂತ್ರಜ್ಞಾನ, ನಾವೀನ್ಯತೆ ಹಾಗೂ ಉಭಯ ದೇಶಗಳ ಜನರ ನಡುವಿನ ಬಾಂಧವ್ಯದಲ್ಲಿ ಭದ್ರವಾದ ಪಾಲುದಾರಿಕೆಯನ್ನು ಹೊಂದಿವೆ. ಉಭಯ ರಾಷ್ಟ್ರಗಳ ನಡುವಿನ ವೈಜ್ಞಾನಿಕ ಸಹಯೋಗದ ದ್ವಿಪಕ್ಷೀಯ ಬಾಂಧವ್ಯದ ಪ್ರಬಲ ಸ್ತಂಭಗಳಲ್ಲಿ ಒಂದಾಗಿ ಹೊರಹೊಮ್ಮಿದೆ. ಸಂಶೋಧನೆ, ನಾವೀನ್ಯತೆ ಹಾಗೂ ಕೈಗಾರಿಕಾ ಅಭಿವೃದ್ಧಿಯ ಮುಂಚೂಣಿ ಕ್ಷೇತ್ರಗಳಲ್ಲಿ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು.

---

ದೇಶಾದ್ಯಂತ ತೀವ್ರ ಚರ್ಚೆಗೆ ಗ್ರಾಸವಾಗಿದ್ದ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದ ಐವರು ಪ್ರಮುಖ ಆರೋಪಿಗಳ ನ್ಯಾಯಾಂಗ ಬಂಧನವನ್ನು ದೆಹಲಿ ನ್ಯಾಯಾಲಯ ಈ ತಿಂಗಳ 15 ರವರೆಗೆ ವಿಸ್ತರಿಸಿದೆ. ಆರೋಪಿಗಳ ಬಂಧನ ಅವಧಿ ವಿಸ್ತರಿಸುವಂತೆ ತನಿಖಾ ಸಂಸ್ಥೆ ಸಿಬಿಐ, ಸಲ್ಲಿಸಿದ್ದ ಮನವಿಯನ್ನು ವಿಶೇಷ ನ್ಯಾಯಾಲಯ ಪುರಸ್ಕರಿಸಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ನಿನ್ನೆಯಷ್ಟೇ ಇಬ್ಬರು ಭೌತಶಾಸ್ತ್ರ ಉಪನ್ಯಾಸಕರು ಹಾಗೂ ಒಬ್ಬ ವೈದ್ಯರನ್ನು 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಸಿಬಿಐ ಇದುವರೆಗೆ ಒಟ್ಟು 13 ಮಂದಿಯನ್ನು ಬಂಧಿಸಿದೆ.

ಪ್ರಶ್ನೆ ಪತ್ರಿಕೆ ಸೋರಿಕೆ ಹಿನ್ನೆಲೆಯಲ್ಲಿ ಮೇ 3 ರಂದು ನಡೆದಿದ್ದ ನೀಟ್ ಪರೀಕ್ಷೆಯನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ರದ್ದುಪಡಿಸಿದ್ದು, ಬರುವ ಜೂನ್ 21 ರಂದು ಮರುಪರೀಕ್ಷೆ ನಡೆಯಲಿದೆ.

---

ಮ್ಯಾನ್ಮಾರ್ ಅಧ್ಯಕ್ಷ ಯು ಮಿನ್ ಆಂಗ್ ಹ್ಲೈಂಗ್ ಅವರು ತಮ್ಮ ನಾಲ್ಕು ದಿನಗಳ ಭಾರತ ಪ್ರವಾಸದ ಅಂಗವಾಗಿ ಇಂದು ಮುಂಬೈಗೆ ಆಗಮಿಸಿದರು. ಛತ್ರಪತಿ ಶಿವಾಜಿ ಮಹಾರಾಜ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮಹಾರಾಷ್ಟ್ರ ರಾಜ್ಯಪಾಲ ಜಿಷ್ಣು ದೇವ್ ವರ್ಮ, ಮ್ಯಾನ್ಮಾರ್ ಅಧ್ಯಕ್ಷರನ್ನು ಸ್ವಾಗತಿಸಿದರು.
ಮ್ಯಾನ್ಮಾರ್ ಅಧ್ಯಕ್ಷರು ಇಂದು ವಿವಿಧ ಉದ್ಯಮ ಮತ್ತು ವಾಣಿಜ್ಯ ರಂಗದ ಸಂವಾದಗಳಲ್ಲಿ ಭಾಗವಹಿಸಲಿದ್ದಾರೆ.
ಇಂದು ಲೋಕ ಭವನದಲ್ಲಿ ಅವರ ಗೌರವಾರ್ಥವಾಗಿ ಆಯೋಜಿಸಲಾದ ವಿಶೇಷ ಕಾರ್ಯಕ್ರಮದಲ್ಲೂ ಪಾಲ್ಗೊಳ್ಳಲಿದ್ದಾರೆ.
ಈ ಸಂದರ್ಭದಲ್ಲಿ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಉಪಸ್ಥಿತರಿರಲಿದ್ದಾರೆ.

---

ಕೇರಳ ವಿಧಾನಸಭೆಯ ಉಪಸಭಾಪತಿಯಾಗಿ ಕಾಂಗ್ರೆಸ್ ನಾಯಕಿ ಶಾನಿಮೋಲ್ ಉಸ್ಮಾನ್ ಆಯ್ಕೆಯಾಗಿದ್ದಾರೆ.
ಇಂದು ನಡೆದ ಚುನಾವಣೆಯಲ್ಲಿ ಶಾನಿಮೋಲ್ ಉಸ್ಮಾನ್ 99 ಮತಗಳನ್ನು ಪಡೆಯುವ ಮೂಲಕ ಜಯಗಳಿಸಿದರು.
ಇವರ ವಿರುದ್ಧ ಸ್ಪರ್ಧಿಸಿದ್ದ ವಿರೋಧ ಪಕ್ಷದ ಅಭ್ಯರ್ಥಿ ಮೊಹಮ್ಮದ್ ಮೊಹ್ಸಿನ್ 34 ಮತಗಳನ್ನು ಪಡೆದರು. ಬಿಜೆಪಿಯ ಮೂವರು ಶಾಸಕರು ಮತದಾನ ಪ್ರಕ್ರಿಯೆಯಿಂದ ದೂರ ಉಳಿದಿದ್ದರು.

---

ಇಂಗ್ಲೆಂಡ್ ನ ಟೌಂಟನ್‌ನ ಕೂಪರ್ ಅಸೋಸಿಯೇಟ್ಸ್ ಕೌಂಟಿ ಮೈದಾನದಲ್ಲಿ ಇಂದು ಭಾರತ ಮತ್ತು ಇಂಗ್ಲೆಂಡ್ ಮಹಿಳಾ ತಂಡಗಳು ಮೂರನೇ ಮತ್ತು ಅಂತಿಮ ಟಿ–20 ಅಂತಾರಾಷ್ಟ್ರೀಯ ಪಂದ್ಯ ನಡೆಯಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ 11 ಗಂಟೆಗೆ ಆರಂಭವಾಗಲಿದೆ.

ಪ್ರಸ್ತುತ ಎರಡು ತಂಡಗಳು 1–1 ಅಂತರದಿಂದ ಸಮಬಲ ಹೊಂದಿವೆ.

---

ವಿದ್ಯುತ್ ಮತ್ತು ಎಲೆಕ್ಟ್ರಾನಿಕ್ ಚಾಲಿತ ಹೆದ್ದಾರಿಗಳ ಅಭಿವೃದ್ಧಿಯ ಮೂಲಕ ಭಾರತ, ಸ್ಮಾರ್ಟ್, ಸಂಪರ್ಕಿತ ಮತ್ತು ಸುಸ್ಥಿರ ಚಲನಶೀಲತೆಯ ಹೊಸ ಯುಗದತ್ತ ಸಾಗುತ್ತಿದೆ ಎಂದು ವಿದ್ಯುತ್ ವಾಹನಗಳ ರಾಷ್ಟ್ರೀಯ ಹೆದ್ದಾರಿಗಳ ನಿರ್ದೇಶಕ ಅಭಿಜೀತ್ ಸಿನ್ಹಾ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಉಪಕ್ರಮವು ಭಾರತದ ವಿದ್ಯುತ್ ಚಲನಶೀಲ ಪರಿಸರ ವ್ಯವಸ್ಥೆಯನ್ನು ಬಲಪಡಿಸುವುದರ ಜೊತೆಗೆ ಚಲನಶೀಲತೆಯ ಸುಲಭತೆ, ರಸ್ತೆ ಸುರಕ್ಷತೆ ಮತ್ತು ಲಾಜಿಸ್ಟಿಕ್ಸ್ ದಕ್ಷತೆಯನ್ನು ಸುಧಾರಿಸುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದರು.

NHEV, 2018–19 ರಿಂದ ದೇಶದ ಮಾದರಿ ವಿದ್ಯುತ್ ಹೆದ್ದಾರಿ ಕಾರ್ಯನಿರ್ವಹಿಸುತ್ತಿದೆ. ಪ್ರಸ್ತಾವಿತ ಹೆದ್ದಾರಿ ಪರಿಸರ ವ್ಯವಸ್ಥೆಯು ಸುರಕ್ಷಿತ, ಹೆಚ್ಚು ಪರಿಣಾಮಕಾರಿ ಮತ್ತು ತಂತ್ರಜ್ಞಾನ–ಚಾಲಿತ ಸಾರಿಗೆ ಜಾಲಗಳನ್ನು ರಚಿಸಲು ವಿದ್ಯುತ್ ಚಾರ್ಜಿಂಗ್ ಮೂಲಸೌಕರ್ಯ, ಡಿಜಿಟಲ್ ವ್ಯವಸ್ಥೆಗಳು ಮತ್ತು ತುರ್ತು ಪ್ರತಿಕ್ರಿಯೆ ಕಾರ್ಯವಿಧಾನಗಳನ್ನು ಸಂಯೋಜಿಸುತ್ತದೆ ಎಂದು ಅವರು ಮಾಹಿತಿ ನೀಡಿದರು.

__________ ಮುಕ್ತಾಯ __________